**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಶಹಾಬಾದ**

**CC.No. 236/2023**

**CW : 05 PW: 02**

**ಸಾಕ್ಷಿಯನ್ನು ಪ್ರಮಾಣೀಕರಿಸಿದ ದಿನಾಂಕ : 17.03.2026**

| | |
|---|---|
| ಹೆಸರು | : ದೇವರಾಜ ರಾಠೋಡ |
| ತಂದೆಯ ಹೆಸರು | : ಮನು |
| ವಯಸ್ಸು | : 33 |
| ಉದ್ಯೋಗ | : ಎಲ್.ಐ.ಸಿ. ಎಜೆಂಟ |
| ವಾಸಸ್ಥಳ | : ಥರಿ ತಾಂಡ |

**<u>ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ</u>**

ನನಗೆ ಚಾಸಾ-4, 6 ರಿಂದ 8 ಇವರ ಪರಿಚಯ ಇರುತ್ತದೆ. ಆರೋಪಿತರ ಪರಿಚಯ ನನಗೆ ಇರುತ್ತದೆ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ವೈಯುಕ್ತಿಕ ಮಾಹಿತಿ ಇರುವುದಿಲ್ಲ. ನಾನು ಯಾವುದೇ ಜಗಳವನ್ನು ಬಿಡಿಸಿರುವುದಿಲ್ಲ. ಈ ಕುರಿತು ನಾನು ಪೋಲೀಸರ ಮುಂದೆ ನಾನು ಹೇಳಿಕೆ ನೀಡಿರುವುದಿಲ್ಲ. ದೂರು ಯಾರು ನೀಡಿರುತ್ತಾರೆ ಎಂದು ನನಗೆ ಹೇಳಲು ಬರುವುದಿಲ್ಲ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲು : ಸಹಾಯಕ ಸರ್ಕಾರಿ ಅಭಿಯೋಜಕರಿಂದ</u>**

ದಿ: 24/01/2023 ರಂದು ರಾತ್ರಿ 8 ರ ಸುಮಾರಿಗೆ ನಾನು ಮನೆಯಲ್ಲಿ ಇದ್ದಾಗ ಚಾಸಾ- 1 ರವರ ಮನೆಯ ಮುಂದೆ ಜಗಳದ ಸಪ್ಪಳ ಕೇಳಿ ನಾನು ಅಲ್ಲಿಗೆ ಹೋಗಿರುತ್ತೇನೆ ಎಂದರೆ ಸರಿಯಲ್ಲ. ನಮ್ಮ ತಾಂಡಾದ ಆರೋಪಿತರು ಮತ್ತು ಚಾಸಾ-1 ರವರಿಗೆ ಇವರಿಗೆ ಆಸ್ತಿ ವಿಷಯವಾಗಿ ಅವಾಚ್ಯ ಶಬ್ದಗಳಿಂದ ಬೈದು, ಕೈ ಹಿಡಿದು ಎಳೆದಾಡಿ, ಕೈಯಿಂದ ಬೆನ್ನಿನ ಮೇಲೆ ಹೊಡೆದು ಅವಮಾನಗೊಳಿಸಿರುತ್ತಾರೆ ಎಂದರೆ ಸರಿಯಲ್ಲ.

ಅದನ್ನು ನಾನು, ಚಾಸಾ-6 ರಿಂದ 8 ರವರು ಜಗಳವನ್ನು ಬಿಡಿಸಿರುತ್ತೇವೆ ಎಂದರೆ ಸರಿಯಲ್ಲ. ಘಟನೆ ಕುರಿತು ದಿ: 26/01/2023 ರಂದು ಈಗ ಓದಿ ಹೇಳಿದ ಹಾಗೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿ.ಪಿ.3 ಎಂದು ನಿಶಾನೆಗೊಳಿಸಲಾಯಿತು. ನಿ.ಪಿ.3 ಹೇಳಿಕೆ ನೀಡಿದ್ದರೂ ಸಹ ನಾನು ಆರೋಪಿರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ

ಸರಿಯಲ್ಲ. ಈ ಪ್ರಕರಣದಲ್ಲಿ ಚಾಸಾ-1 ರವರು ದೂರು ನೀಡಿರುತ್ತಾರೆ ಎಂದರೆ ಸರಿಯಲ್ಲ. ನಿ.ಪಿ.3 ರಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ಮಾಹಿತಿ ಇದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ**

ಈ ಹಂತದಲ್ಲಿ ಆರೋಪಿ ಪರ ವಕೀಲರು ಪಾಟೀ ಸವಾಲು ಏನೂ ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ : ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ ಇದೆ.**

**Sd/-**
**ಪ್ರ.ದ.ನ್ಯಾ.ದಂ.ಗಳು, ಶಹಾಬಾದ**